# ಮಾಸ ಭವಿಷ್ಯ

-ಅರುಣ ಪಿ. ಭಟ್



**ಮೇಷ:** ನಿಮ್ಮ ಸಾಮಾಜಿಕ ಹಾಗೂ ರಾಜಕೀಯದ ಬದುಕು ವೃದ್ಧಿಯಾಗುತ್ತಾ ಸಾಗುತ್ತದೆ. ಆತ್ಮವಿಶ್ವಾಸ ಬೆಳೆಯುತ್ತದೆ ಮತ್ತು ಪ್ರಗತಿ ನಿಶ್ಚಿತವಾಗಿದೆ. ವೆಚ್ಚ ಏರಿದರೂ ಆದಾಯದಲ್ಲಿನ ಹೆಚ್ಚಳ ಖರ್ಚುಗಳನ್ನು ಸರಿದೂಗಿಸುತ್ತದೆ. ವಿರೋಧಿಗಳಿಂದ ದೂರವಿರಲು ಪ್ರಯತ್ನಿಸಿ.ಶುಭ: 11,18,27. ಅಶುಭ: 16,20,29.

**ವೃಷಭ:** ಶ್ರಮದ ಕೆಲಸಗಳಿಂದ ಸಾರ್ಥಕತೆಯ ಭಾವನೆ ನಿಮ್ಮಲ್ಲಿ ಕಾಣಬಹುದು. ಉದ್ಯೋಗ ಸ್ಥಳದಲ್ಲಿ ನಿಮ್ಮ ವರ್ಚಸ್ಸು ಹೆಚ್ಚುವ ಸಾಧ್ಯತೆ ಇದೆ. ಹಿರಿಯ ಅಧಿಕಾರಿಗಳು, ಸಹೋದ್ಯೋಗಿಗಳ ಜತೆಗೆ ನಿಮ್ಮ ಬಾಂಧವ್ಯ ಗಟ್ಟಿ ಆಗಲಿದೆ. ಶುಭ: 16,21,28. ಅಶುಭ: 12,19,27.





**ಮಿಥುನ:** ನೀವು ಮಾಡುವ ಕೆಲಸದಲ್ಲಿ ಉತ್ತಮ ಫಲಿತಾಂಶ ಹಾಗೂ ಆದಾಯ ವೃದ್ಧಿಯಾಗಲಿದೆ. ಪರಿವಾರದವರಿಂದ ಸಂತಸ ನೆಮ್ಮದಿ. ಆತ್ಮೀಯರಿಂದ ವಿಶೇಷ ಉಡುಗೊರೆಗಳನ್ನು ಪಡೆಯಲಿದ್ದೀರಿ. ಒಟ್ಟಾರೆ ತಿಂಗಳಿಡೀ ಸಂತಸವಾಗಿರುವಿರಿ. ವಿದ್ಯಾರ್ಥಿಗಳಿಗೆ ಶುಭ. ಶುಭ:12,18,26. ಅಶುಭ: 17,20,29.

**ಕರ್ಕ:** ಕೌಟುಂಬಿಕ ಸಮಸ್ಯೆಗಳು ಸರಿಹೋಗಲಿದೆ. ಉದ್ಯೋಗದ ಸ್ಥಿತಿ ಚೇತರಿಕೆಯತ್ತ ಸಾಗುತ್ತದೆ. ಉದ್ಯೋಗದಲ್ಲಿ ಪ್ರಗತಿ ಸಾಧ್ಯತೆ. ಯಶಸ್ವಿದಾಯಕ ನಿರ್ಣಯಗಳಿಂದ ಸ್ಥಾನ ಗಟ್ಟಿಗೊಳಿಸಿಕೊಳ್ಳುವಿರಿ. ಕಲಾವಿದರಿಗೆ ದೊಡ್ಡ ಯಶಸ್ಸು. ಪ್ರೇಮಿಗಳಿಗೆ ವಿವಾಹ ಭಾಗ್ಯ. ಶುಭ: 11,22,29. ಅಶುಭ: 14,25,30.





**ಸಿಂಹ:** ನಿಮ್ಮ ವಿನಯದ ಸ್ವಭಾವದಿಂದ ಹೆಚ್ಚಿನ ಹೆಸರು ಸಂಪಾದನೆ ಮಾಡಲಿದ್ದೀರಿ. ಸಂಗಾತಿಯ ಬಯಕೆಗಳಿಗೆ ನೀವು ಸಮ್ಮತಿಯ ವಾಗ್ದಾನ ನೀಡಲಿದ್ದೀರಿ. ಕೆಲಸದ ಸಮಯದಲ್ಲಿ ವಿಶೇಷ ಯಶಸ್ಸನ್ನು ಪಡೆಯುತ್ತೀರಿ. ಹಿರಿಯ ಅಧಿಕಾರಿ ನಿಮ್ಮನ್ನು ಬೆಂಬಲಿಸುತ್ತಾರೆ. ಶುಭ: 15,17,26. ಅಶುಭ: 11,18,29.

**ಕನ್ಯಾ:** ಮನದಲ್ಲಿ ಹೊಸ ಯೋಜನೆಗಳಿದ್ದಲ್ಲಿ ಈ ತಿಂಗಳು ಪ್ರಾರಂಭಿಸಲು ಒಳ್ಳೆಯ ಸಮಯ. ಪಶುಸಂಗೋಪನೆ, ಕೃಷಿ ಚಟುವಟಿಕೆಗಳಲ್ಲಿ ಉತ್ತಮವಾದ ಬೆಳವಣಿಗೆ ಕಂಡುಬರುತ್ತದೆ. ಆಲಸ್ಯತನ ತೋರುವುದರಿಂದ ಕೆಲಸ ಕಾರ್ಯಗಳಲ್ಲಿ ಹಿನ್ನಡೆ. ಶುಭ: 14,18,27. ಅಶುಭ: 15,18,22.





**ತುಲಾ:** ಸಣ್ಣ ಪ್ರವಾಸ ಮಾಡಬೇಕಾಗಿ ಬರುತ್ತದೆ. ಸಂಸ್ಥೆಯೊಂದರ ಜತೆ ಮಹತ್ತರವಾದ ಒಪ್ಪಂದವೊಂದಕ್ಕೆ ಸಹಿ ಹಾಕುವ ಸಾಧ್ಯತೆ ಇದೆ. ಆದಾಯದಲ್ಲಿ ಹೆಚ್ಚಳ ಆಗುತ್ತದೆ. ಬಹಳ ದಿನಗಳಿಂದ ಅಂದುಕೊಳ್ಳುತ್ತಿದ್ದ ಕೆಲಸಗಳಲ್ಲಿ ಪ್ರಗತಿ ಕಾಣಿಸುತ್ತದೆ. ಶುಭ: 12,19,26. ಅಶುಭ: 14,17,29.

**ವೃಶ್ಚಿಕ:** ಉತ್ತಮ ಆರ್ಥಿಕ ಗಳಿಕೆ ಇದ್ದರೂ ಕೆಲವೊಂದು ವಿಷಯಗಳಲ್ಲಿ ನಿಮ್ಮ ದುಡುಕುತನ ದೊಡ್ಡಪೆಟ್ಟನ್ನು ನೀಡಬಹುದಾಗಿದೆ. ನಿಮ್ಮ ಮನೋಕಾಮನೆಗಳನ್ನು ಆದಷ್ಟು ನಿಯಂತ್ರಿಸಿಕೊಳ್ಳಿ. ವೈಯಕ್ತಿಕ ಸಂಬಂಧದಲ್ಲಿ ಸಂತೋಷ ಕಾಣಿಸಿಕೊಳ್ಳುತ್ತದೆ. ಶುಭ: 11,21,28. ಅಶುಭ: 9,12,30.





**ಧನು:** ವೈಯಕ್ತಿಕ ಹಾಗೂ ವೃತ್ತಿಪರ ಬದುಕಿನಲ್ಲಿ ಲಾಭ ಹಾಗೂ ಮಹತ್ತರವಾದ ಪ್ರಗತಿ ಕಾಣುವ ಯೋಗ ಇದೆ. ಮನೆಗೆ ಎಲೆಕ್ಟ್ರಾನಿಕ್ ವಸ್ತುಗಳ ಖರೀದಿ ಮಾಡಲಿದ್ದೀರಿ. ಸಿನಿಮಾ, ವೈದ್ಯಕೀಯ, ಕಲೆ ಈ ರೀತಿಯ ವೃತ್ತಿಯಲ್ಲಿ ಇರುವವರಿಗೆ ಅತ್ಯುತ್ತಮವಾದ ಲಾಭ ಇದೆ. ಶುಭ: 13,19,29. ಅಶುಭ: 12,20,30.

**ಮಕರ:** ಕುಟುಂಬ ಸದಸ್ಯರ ಜತೆಗೆ ಹೆಚ್ಚಿನ ಸಮಯ ಕಳೆಯುವ ಸಾಧ್ಯತೆ ಇದೆ. ಈ ತಿಂಗಳು ಹೆಚ್ಚು ಚಟುವಟಿಕೆಯಿಂದ ನೀವು ಇರಬೇಕಾಗುತ್ತದೆ. ನೀವು ಪ್ರತಿನಿಧಿಸುವ ಸಂಸ್ಥೆಯ ಸಾಮರ್ಥ್ಯವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲವು ಸೂತ್ರಗಳನ್ನು ರೂಪಿಸಲಿದ್ದೀರಿ. ಶುಭ: 12,18,25. ಅಶುಭ: 10,16,29.





**ಕುಂಭ:** ವ್ಯಾಪಾರಸ್ಥರಿಗೆ ಉತ್ತಮವಾದ ಸಮಯ ಇದು. ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸಿದ್ಧತೆ ನಡೆಸುತ್ತಿರುವವರಿಗೆ ಯಶಸ್ಸು ದೊರೆಯಲಿದೆ. ಬರವಣಿಗೆ, ರಾಜಕೀಯ ಕ್ರಿಯಾತ್ಮಕ ಕ್ಷೇತ್ರಗಳಲ್ಲಿ ತೊಡಗಿರುವವರಿಗೆ ಪ್ರಗತಿ ಬಡ್ತಿ ದೊರೆಯುವ ಸಮಯ ಇದು. ಶುಭ: 10,16,28. ಅಶುಭ: 12,17,26.

**ಮೀನ:** ಉದ್ಯೋಗ ಬದಲಾವಣೆಗಾಗಿ ಪ್ರಯತ್ನಿಸುತ್ತಿರುವವರಿಗೆ ಶುಭ ಸುದ್ದಿ ಇದೆ. ಸ್ಪರ್ಧೆ, ಕ್ರೀಡೆಗಳಲ್ಲಿ ಯಶಸ್ಸು ದೊರೆಯಲಿದೆ. ಸಾಮಾಜಿಕ ಜೀವನದಲ್ಲಿ ಸಕ್ರಿಯರಾಗಿ ತೊಡಗಿಕೊಳ್ಳಲಿದ್ದೀರಿ. ನೈತಿಕ ವಿಚಾರ ಹೆಚ್ಚು ಚಿಂತಿಸುತ್ತೀರಿ. ಹಣಕಾಸಿನ ಸ್ಥಿತಿ ಉತ್ತಮವಾಗಲಿದೆ. ಶುಭ: 11,19,28. ಅಶುಭ: 14,21,30.

